## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 107(187)
ಮಾನ್ಯ ಸದಸ್ಯರ ಹೆಸರು : ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ).
ಉತ್ತರಿಸುವ ದಿನಾಂಕ : 01.02.2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಕಾಲ್ಪನಿಕ ವೇತನ ಬಡ್ತಿ ಪಡೆಯಲು ಅರ್ಹರಾಗಿರುವ ಸಿಬ್ಬಂದಿ ವರ್ಗದವರೆಷ್ಟು; ಹಾಗೂ ಇದಕ್ಕೆ ಹಣವೆಷ್ಟು; | ಕಾಲ್ಪನಿಕ ವೇತನ ಕೇಳುತ್ತಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿನ ಸಿಬ್ಬಂದಿಗಳ ಸಂಖ್ಯೆ ಈ ಕೆಳಕಂಡಂತಿದೆ:- (see table below) ವಾಸ್ತವ ವೆಚ್ಚದ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. |

| ವಿಭಾಗ | ಬೋಧಕ | ಬೋಧಕೇತರ | ಒಟ್ಟು |
|---|---|---|---|
| ಪ್ರೌಢ | 12064 | 2443 | 14507 |
| ಪದವಿ ಪೂರ್ವ | 4280 | 1468 | 5748 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ | ಕಾಲ್ಪನಿಕ ವೇತನ ಬಡ್ತಿ ನೀಡಲು ಶ್ರೀ ಬಸವರಾಜ ಹೊರಟ್ಟಿಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯು ಸರ್ಕಾರಕ್ಕೆ ವರದಿ ನೀಡಲಾಗಿದೆಯೇ; ಸರ್ಕಾರವು ವರದಿಯನ್ನು ಅಂಗೀಕರಿಸಿರುವುದೇ;(ವಿವರ ನೀಡುವುದು) | ಸಮಿತಿಯು ಸರ್ಕಾರಕ್ಕೆ ವರದಿಯನ್ನು ನೀಡಿರುತ್ತದೆ.<br><br>ಅನುದಾನ ಸಂಹಿತೆಯ ಪ್ರಕಾರ ಅನುದಾನಕ್ಕೊಳಪಟ್ಟ ಸಿಬ್ಬಂದಿಗೆ ಅನುದಾನ ದೊರೆತ ದಿನಾಂಕದಿಂದ ಮಾತ್ರ ಕನಿಷ್ಟ ವೇತನ ನಿಗದಿ ಮಾಡಬೇಕೆಂದು. ಹಿಂದಿನ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಈ ಸಂಬಂಧ ಸರ್ಕಾರವು ದಿನಾಂಕ:01-06-1995 ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂಧಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೇ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಜಾರಿಗೆ ತರಲಾಗಿದೆ.<br><br>ಈ ಅಧಿನಿಯಮವನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಪ್ರಶ್ನಿಸಿರುವ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಂಬಂಧದ ಪ್ರಕರಣಗಳಲ್ಲಿ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:10-07-2015ರಂದು ನೀಡಿದ ತೀರ್ಪಿನಲ್ಲಿ ಸದರಿ ಅಧಿನಿಯಮವನ್ನು "struck down" ಮಾಡಿರುತ್ತದೆ.<br><br>ಮೇಲಿನ ಮಾನ್ಯ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚನ್ಯಾಯಾಲಯ . ಬೆಂಗಳೂರು ಇಲ್ಲಿ ರಿಟ್ ಅಪೀಲ್ ಸಂಖ್ಯೆ:2476/2015 ಮತ್ತು 2467/2015ನ್ನು ದಾಖಲಿಸಿದೆ. ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ:27-11-2015ರಂದು ತಡೆಯಾಜ್ಞೆ ನೀಡಿರುತ್ತದೆ.ಸದರಿ ತಡೆಯಾಜ್ಞೆಯು ಪ್ರಸ್ತುತ ಜಾರಿಯಲ್ಲಿದ್ದು. ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ.<br><br>ಸಮಿತಿಯ ವರದಿ ಮತ್ತು ಇಲಾಖೆಗಳಲ್ಲಿನ ವಾಸ್ತವ ಅಂಕಿಅಂಶಗಳನ್ನು ಪರಿಶೀಲಿಸಲಾಗಿ.ಹಾಲಿ ನೀಡಲಾಗುತ್ತಿರುವ ವೇತನಕ್ಕೆ ಅನುದಾನ ರಹಿತ ಅವಧಿಯನ್ನು ಪರಿಗಣನೆಗೆ ತೆಗೆದುಕೊಂಡು ವೇತನವನ್ನು ಪರಿಷ್ಕರಿಸಿದಲ್ಲಿ ಹೆಚ್ಚುವರಿಯಾಗಿ ವಾರ್ಷಿಕವಾಗಿ ರೂ.359.87ಕೋಟಿಗಳ ಅನುದಾನವು ಬೇಕಾಗುತ್ತದೆ. ಆದರೆ, ಅವರಿಗೆ ಹಿಂಬಾಕಿ ಮತ್ತು ಪಿಂಚಣಿಗಾಗಿ ತಗಲುವ ಅಂದಾಜು ವೆಚ್ಚವು ಪ್ರಸ್ತಾಪಿತ ರೂ.359.87 ಕೋಟಿಗಳಲ್ಲಿ ಒಳಗೊಂಡಿರುವುದಿಲ್ಲ. ಸದರಿ ಮೊತ್ತವಾದ ರೂ.359.87/- ಕೋಟಿ ಒಂದು ವರ್ಷಕ್ಕೆ ಬೇಕಾದ ಹೆಚ್ಚುವರಿ ಮೊತ್ತವಾಗುತ್ತದೆ.ಈ ಅನುಕೂಲ ಪಡೆಯುವ ಸಿಬ್ಬಂದಿ ಪೂರ್ಣ ಸೇವಾವಧಿಯಲ್ಲಿ ಪಡೆಯುವ ಮೊತ್ತದ ಒಟ್ಟು ಮೊತ್ತದ |
| ಇ | ಕಾಲ್ಪನಿಕ ವೇತನ ಬಡ್ತಿ ನೀಡುವ ಬಗ್ಗೆ ಸರ್ಕಾರವು ನಿರ್ಧಾರ ಕೈಗೊಂಡಿದೆಯೇ; | |
| ಈ | ಯಾವ ಕಾಲಮಿತಿಯಲ್ಲಿ ಕಾಲ್ಪನಿಕ ವೇತನ ಬಡ್ತಿಯನ್ನು ನೀಡಲಾಗುತ್ತದೆ? (ವಿವರ ನೀಡುವುದು) | |